ವಿ-72 (179)

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ವಿ.ಸಂಕನೂರ ಹಾಗೂ ಶ್ರೀ ಆಯನೂರು ಮಂಜುನಾಥ, ರವರುಗಳು ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

ಪ್ರಶ್ನೆ:

ಪೊಲೀಸ್ ಇಲಾಖೆಯಲ್ಲಿ 2012ರ, 750 ಐ.ಆರ್.ಬಿ. ಪೊಲೀಸ್ ಪೇದೆಗಳ ನೇಮಕಾತಿಯ ಪ್ರಕ್ರಿಯೆಯಲ್ಲಿ, ಲಿಖಿತ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆದು, ವೈದ್ಯಕೀಯ ಪರೀಕ್ಷೆ, ಸಿಂಧುತ್ವ ಪ್ರಮಾಣ ಸಲ್ಲಿಸಿದ ನಂತರವೂ ಸುಮಾರು 26 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡದೇ ಇರುವುದರಿಂದ ಅನ್ಯಾಯವಾಗಿದ್ದು ಈ ಬಗ್ಗೆ ಮಾನ್ಯ ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

2012ನೇ ಸಾಲಿನಲ್ಲಿ ಕೆಎಸ್‌ಆರ್‌ಪಿ, ಐಆರ್‌ಬಿ ಹಾಗೂ ಕೆಎಸ್‌ಐಎಸ್‌ಎಫ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ನೇಮಕಾತಿಯ ಅಧಿಸೂಚನೆಯನ್ನು ನೇಮಕಾತಿ ಕಛೇರಿಯಿಂದ ಏಕಕಾಲದಲ್ಲಿ ಹೊರಡಿಸಲಾಗಿರುತ್ತದೆ. ಈ 3 ಘಟಕಗಳ ತಾತ್ಕಾಲಿಕ ಆಯ್ಕೆ ಪಟ್ಟಿಗಳನ್ನೂ ಸಹ ಏಕಕಾಲದಲ್ಲಿ ಪ್ರಕಟಣೆಗೊಳಿಸಲಾಗಿರುತ್ತದೆ. ಮೂರು ಘಟಕಗಳಿಗೆ ಏಕಕಾಲದಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಸಂಖ್ಯೆ ಹೆಚ್ಚಿದ್ದ ಕಾರಣ ಹೆಚ್ಚುವರಿ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ ಹಾಗೂ ವೈದ್ಯಕೀಯ ಪರೀಕ್ಷೆ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿರುತ್ತದೆ. ಈ ಸಂದರ್ಭದಲ್ಲಿ ಅಭ್ಯರ್ಥಿಗಳಿಗೂ ಸಹ ಈ ಬಗ್ಗೆ ಮಾಹಿತಿ ನೀಡಲಾಗಿರುತ್ತದೆ. ತಾತ್ಕಾಲಿಕ ಆಯ್ಕೆ ಪಟ್ಟಿಯನ್ವಯ ಹಾಗೂ ದಾಖಲಾತಿ ಪರಿಶೀಲನೆ ಮತ್ತು ವೈದ್ಯಕೀಯ ಪರೀಕ್ಷೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ ನೇಮಕಾತಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಸದರಿ ಅಂತಿಮ ಆಯ್ಕೆ ಪಟ್ಟಿಯಲ್ಲಿ ಅರ್ಜಿದಾರರುಗಳು ಅರ್ಹತೆಯನುಸಾರ ಸ್ಥಾನವನ್ನು ಪಡೆದಿರುವುದಿಲ್ಲ. ಆದಾಗ್ಯೂ ಸಹ ಅರ್ಜಿದಾರರು ಕೇವಲ ದಾಖಲಾತಿ ಪರಿಶೀಲನೆ ಹಾಗೂ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾದ ಕಾರಣವನ್ನು ಪ್ರತಿಪಾದಿಸಿಕೊಂಡು ನೇಮಕಾತಿ ಆದೇಶ ನೀಡುವಂತೆ ಕೋರುತ್ತಿರುತ್ತಾರೆ.

ತತ್ಸಂಬಂಧ, ಸದರಿ ಅಭ್ಯರ್ಥಿಗಳು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ: 5160-5169/2015 ಯನ್ನು ಸಲ್ಲಿಸಿದ್ದು, ಸದರಿ ಅರ್ಜಿಯಲ್ಲಿ ನೇಮಕಾತಿ ಆದೇಶ ಹೊರಡಿಸಿದ ನಂತರ ಕರ್ತವ್ಯಕ್ಕೆ ಹಾಜರಾಗದೇ ರಿಕ್ತ ಉಳಿದ ಸ್ಥಾನಗಳಿಗೆ ತಮ್ಮನ್ನು ಪರಿಗಣಿಸುವಂತೆ ಕೋರಿ ಅರ್ಜಿ ಸಲ್ಲಿಸಿದ್ದು, ಈ ಸಂಬಂಧ, ಮಾನ್ಯ ಕರ್ನಾಟಕ ಆಡಳಿತ ಮಂಡಳಿಯೂ ಸಹ ಸದರಿ ಅರ್ಜಿದಾರರ ಮನವಿಯನ್ನು ಪರಿಶೀಲಿಸಿ ಅರ್ಜಿಯಲ್ಲಿ ಕೋರಲಾದ ಅಂಶಗಳನ್ನು ನೇಮಕಾತಿ ನಿಯಮಾನುಸಾರ ಪರಿಗಣಿಸಲು ಅವಕಾಶವಿಲ್ಲವೆಂದು ತಿಳಿಸಿ ಅರ್ಜಿಯನ್ನು ವಜಾಗೊಳಿಸಲಾಗಿರುತ್ತದೆ. ಸದರಿ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ ಆದೇಶದ ವಿರುದ್ಧ ಅರ್ಜಿದಾರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ಸಂಖ್ಯೆ:1480/2017 (ಎಸ್-ಕೆಎಟಿ)ಯನ್ನೂ ಸಹ ಸಲ್ಲಿಸಿದ್ದು, ಸದರಿ ಅರ್ಜಿಯನ್ನೂ ಸಹ ಮಾನ್ಯ ನ್ಯಾಯಾಲಯವು ಘನ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ಆದೇಶವನ್ನು ಎತ್ತಿ ಹಿಡಿದು ಅರ್ಜಿದಾರರ ಅರ್ಜಿಯನ್ನು ವಜಾಗೊಳಿಸಿ ಆದೇಶ ಹೊರಡಿಸಿರುತ್ತದೆ.

HD/31/PPS/2021 PS-B

(ಬಸವರಾಜ ಬೊಮ್ಮಾಯಿ)
ಗೃಹ, ಕಾನೂನು ಮತ್ತು ಸಂಸದೀಯ
ವ್ಯವಹಾರಗಳ ಸಚಿವರು